ಹೊಸದಾಗಿ ಪೊಲೀಸ್ ಠಾಣೆ ಮಂಜೂರು

76(221) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :- ಮಾನ್ಯ ಗೃಹ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನ ಅತಿ ದೊಡ್ಡ ಗ್ರಮವಾದ ಮೆಹಕರ್ ಗ್ರಾಮದಲ್ಲಿ ಹೊಸದಾಗಿ ಪೊಲೀಸ್ ಠಾಣೆ ಪ್ರಾರಂಭಿಸಲು ಸರ್ಕಾರಕ್ಕೆ ಮನವಿ ಬಂದಿರುವುದು ನಿಜವಲ್ಲವೇ ;

(ಆ) ಈ ಸಾಲಿನಲ್ಲಾದರೂ ಮೆಹಕರ್ ಗ್ರಾಮಕ್ಕೆ ಹೊಸ ಪೊಲೀಸ್ ಠಾಣೆಯನ್ನು ಮಂಜೂರು ಮಾಡಲಾಗುವುದೆ ?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು):-

(ಅ) ಬೀದರ್ ಜಿಲ್ಲೆ, ಹಲಸೂರು ಪೊಲೀಸ್ ಠಾಣೆ ವ್ಯಾಪ್ತಿಯ ಮೆಹಕರ್ ಪೊಲೀಸ್ ಹೊರಠಾಣೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಸಲ್ಲಿಸಲು ಡಿಜಿ ಮತ್ತು ಐಜಿಪಿ ರವರಿಗೆ ಸೂಚಿಸಿದ್ದು ಶೀಘ್ರವೇ ಪ್ರಸ್ತಾವನೆ ಪಡೆದು ಪೊಲೀಸ್ ಠಾಣೆ ತೆರೆಯಲು ಕ್ರಮ ವಹಿಸಲಾಗುವುದು.

ಆ) ಹೌದು.

ಅಧಿಕಾರಿಗಳ ಕರ್ತವ್ಯ ಲೋಪದ ತನಿಖೆ

77(222) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :- ಮಾನ್ಯ ಗೃಹ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಕಳೆದ ಲೋಕಸಭಾ ಚುನಾವಣೆಯಲ್ಲಿ ಬೀದರ್ ಜಿಲ್ಲೆಯಲ್ಲಿ ಅಧಿಕಾರಿಗಳ ಕರ್ತವ್ಯ ಲೋಪದ ಬಗ್ಗೆ ಎಷ್ಟು ದೂರುಗಳು ದಾಖಲಾಗಿವೆ ;

(ಆ) ಈ ರೀತಿ ದಾಖಲಾದ ಪ್ರಕರಣಗಳಲ್ಲಿ ಎಷ್ಟು ಅಧಿಕಾರಿಗಳ ಮೇಲೆ ತನಿಖೆ ನಡೆಸಿ ಕ್ರಮ ಜರುಗಿಸಲಾಗಿದೆ ಹಾಗೂ ಎಷ್ಟು ಪ್ರಕರಣಗಳು ಬಾಕಿ ಇವೆ ?(ಸಂಪೂರ್ಣ ವಿವರ ನೀಡುವುದು)

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು) :–

(ಅ) ಕಳೆದ ಲೋಕಸಭಾ ಚುನಾವಣೆಯಲ್ಲಿ ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಅಧಿಕಾರಿಗಳ ಕರ್ತವ್ಯ ಲೋಪವಾದ ಬಗ್ಗೆ ವರದಿಯಾಗಿರುವುದಿಲ್ಲ.

ಆ) ಇಲ್ಲ.

ಖಾಲಿ ಹುದ್ದೆಗಳನ್ನು 371(ಜೆ) ಪ್ರಕಾರ ಭರ್ತಿಮಾಡುವುದು

79(224) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :–ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರೆ:–

(ಅ) ಬೀದರ್‌ನಲ್ಲಿರುವ ಪಶು ವಿಶ್ವವಿದ್ಯಾಲಯಕ್ಕೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ಖಾಲಿ ಇವೆ ; (ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು 371 (ಜೆ) ಆಧಾರದ ಮೇಲೆ ಭರ್ತಿ ಮಾಡಲು ಪ್ರಕ್ರಿಯೆ ಪ್ರಾರಂಭಿಸಿ ನೇಮಕಾತಿ ಮಾಡಲು ಕ್ರಮ ವಹಿಸಲಾಗುವುದೇ ;

(ಇ) 371(ಜೆ) ನಿಯಮದ ಆಧಾರದಂತೆ ನೇಮಕಾತಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು 371 (ಜೆ) ಪ್ರಕಾರ ನೇಮಕಾತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನ ಸಚಿವರು)

(ಅ) ಬೀದರ್‌ನಲ್ಲಿರುವ ಪಶುವೈದ್ಯಕೀಯ ವಿಶ್ವವಿದ್ಯಾಲಯಕ್ಕೆ ಮಂಜೂರಾದ ಹುದ್ದೆಗಳ ವಿವರ ಈ ಕೆಳಗಿನಂತಿದೆ ;